ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 23/12/2019

# ನೂತನ ಶಾಸಕರಿಂದ ಪ್ರಮಾಣ ವಚನ ಸ್ವೀಕಾರ

## ಬಿಜೆಪಿಯ 12, ಪಕ್ಷೇತರ ಶಾಸಕ ಶರತ್ ಬಚ್ಚೇಗೌಡರಿಂದ ಪ್ರತಿಜ್ಞಾ ವಿಧಿ ಸ್ವೀಕಾರ | ಸಮಾರಂಭಕ್ಕೆ ಗೈರಾದ ಕೈ ಶಾಸಕರು

ಬೆಂಗಳೂರು: ಉಪಚುನಾವಣೆಯಲ್ಲಿ ಜಯಗಳಿಸಿದ ಬಿಜೆಪಿಯ 12 ಹಾಗೂ ಓರ್ವ ಪಕ್ಷೇತರ ಶಾಸಕರು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಭಾನುವಾರ ಬೆಳಗ್ಗೆ ಪ್ರಮಾಣ ವಚನ ಸ್ವೀಕರಿಸಿದರು. ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸಮ್ಮುಖದಲ್ಲಿ ನೂತನ ಶಾಸಕರು ಪ್ರತಿಜ್ಞಾ ವಿಧಿ ಸ್ವೀಕಾರ ಮಾಡಿದರು.

ಅಥಣಿ ಕ್ಷೇತ್ರದ ಶಾಸಕ ಮಹೇಶ್ ಕುಮಟಳ್ಳಿ, ಕಾಗವಾಡ ಶಾಸಕ ಶ್ರೀಮಂತ ಪಾಟೀಲ್, ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ, ಯಲ್ಲಾಪುರ ಶಾಸಕ ಶಿವರಾಮ್ ಹೆಬ್ಬಾರ್ ಮತ್ತು ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಡಾ.ಸುಧಾಕರ್ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಹಿರೇಕೆರೂರು ಕ್ಷೇತ್ರದ ಶಾಸಕ ಬಿ.ಸಿ ಪಾಟೀಲ್ ಅವರು ಭಗವಂತ ಹಾಗೂ ಜಗಜ್ಯೋತಿ ಬಸವವೇಶ್ವರರ ಹೆಸರಿನಲ್ಲಿ, ರಾಣೆಬೆನ್ನೂರು ಕ್ಷೇತ್ರದ ಶಾಸಕ ಅರುಣ್ ಕುಮಾರ್ ಅವರು ಭಗವಂತ ಹಾಗೂ ಕೊಟ್ಟೂರೇಶ್ವರನ ಹೆಸರಿನಲ್ಲಿ, ವಿಜಯನಗರ ಕ್ಷೇತ್ರದ ಶಾಸಕ ಆನಂದ್ ಸಿಂಗ್ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಕೆ.ಆರ್.ಪುರಂ ಕ್ಷೇತ್ರದ ಶಾಸಕ ಬೈರತಿ ಬಸವರಾಜ್, ಯಶವಂತಪುರ ಕ್ಷೇತ್ರದ ಶಾಸಕ ಎಸ್.ಟಿ.ಸೋಮಶೇಖರ್ ಅವರು ಸತ್ಯ ಮತ್ತು ನಿಷ್ಠೆಯ ಹೆಸರಿನಲ್ಲಿ, ಮಹಾಲಕ್ಷ್ಮೀ ಲೇಔಟ್ ಕ್ಷೇತ್ರದ ಶಾಸಕ ಗೋಪಾಲಯ್ಯ ಅವರು ಭಗವಂತನ ಹೆಸರಿನಲ್ಲಿ, ಹೊಸಕೋಟೆ ಕ್ಷೇತ್ರದ ಪಕ್ಷೇತರ ಶಾಸಕ ಶರತ್ ಬಚ್ಚೇಗೌಡ ಅವರು ಭಗವಂತನ ಹೆಸರಿನಲ್ಲಿ ಮತ್ತು ಕೆ.ಆರ್.ಪೇಟೆ ಕ್ಷೇತ್ರದ ಶಾಸಕ ನಾರಾಯಣಗೌಡ ಅವರು ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕಾರ ಮಾಡಿದರು. ಪ್ರತಿಜ್ಞಾ ವಿಧಿ ಸ್ವೀಕಾರ ಮಾಡಿದ ಎಲ್ಲ ಶಾಸಕರಿಗೂ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿಯವರು ಹೂಗುಚ್ಛ ನೀಡಿ ಅಭಿನಂದಿಸಿದರು. ಜತೆಗೆ, ಸಂವಿಧಾನದ ಪುಸ್ತಕ ಮತ್ತು ಸದನದ ನಿಯಮಾವಳಿ ಪುಸ್ತಕವನ್ನು ಉಡುಗೊರೆಯಾಗಿ ನೀಡಿ, ಶುಭ ಕೋರಿದರು. ಈ ವೇಳೆ, ಕೆಲವು ಶಾಸಕರು ಸ್ಪೀಕರ್ ಕಾಲಿಗೆ ಎರಗಿ ಆಶೀರ್ವಾದ ಪಡೆದರು. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಸಚಿವರಾದ ಬಸವರಾಜ ಬೊಮ್ಮಾಯಿ, ಆರ್.ಅಶೋಕ್, ಸುರೇಶ್ ಕುಮಾರ್ ಈ ವೇಳೆ ಹಾಜರಿದ್ದರು.

ಉ.ವಾ. 23/12/19



ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ನೂತನ ಶಾಸಕರ ಜತೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಸಿಎಂ ಬಿ.ಎಸ್.ಯಡಿಯೂರಪ್ಪ ಇತರರಿದ್ದರು.

## ಸಂಕ್ರಾಂತಿಗೆ ಸಚಿವ ಸಂಪುಟ ವಿಸ್ತರಣೆ ಸಾಧ್ಯತೆ

ಬೆಂಗಳೂರು: ನಾವು ಭರವಸೆ ನೀಡಿದಂತೆ ಉಪಚುನಾವಣೆಯಲ್ಲಿ ಗೆದ್ದವರಿಗೆ ಸಚಿವ ಸ್ಥಾನ ನೀಡಲಿದ್ದೇವೆ. ಮುಂದಿನ ವಾರ ದೆಹಲಿಗೆ ತೆರಳಲಿದ್ದು, ಸಂಕ್ರಾಂತಿ ವೇಳೆಗೆ ಸಿಹಿಸುದ್ದಿ ಸಿಗಲಿದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ವಿಧಾನಸೌಧದಲ್ಲಿ ಭಾನುವಾರ ಮಾತನಾಡಿದ ಅವರು, ನೂತನ ಶಾಸಕರು ಪ್ರಮಾಣವಚನ ಸ್ವೀಕಾರ ಮಾಡಿದ್ದಾರೆ. ಅವರಿಗೆ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತೇವೆ ಹಾಗೂ ಗೆದ್ದವರನ್ನು ಸಚಿವರನ್ನಾಗಿ ಮಾಡಲಿದ್ದೇವೆ. ಸಚಿವ ಸಂಪುಟವನ್ನು ಆದಷ್ಟು ಬೇಗ ವಿಸ್ತರಿಸುವ ಅಭಿಲಾಷೆಯಿದೆ ಎಂದು ತಿಳಿಸಿದರು. ಒಂದು ವಾರ ಬಿಟ್ಟು ದೆಹಲಿಗೆ ಬರುವಂತೆ ಕೇಂದ್ರದ ವರಿಷ್ಠರು ಸೂಚನೆ ನೀಡಿದ್ದಾರೆ. ಹೀಗಾಗಿ, ಮುಂದಿನ ವಾರ ದೆಹಲಿಗೆ ಪ್ರಯಾಣ ಬೆಳೆಸಲಿದ್ದೇನೆ. ಗೆದ್ದ ಶಾಸಕರಿಗೆ ಮಂತ್ರಿಸ್ಥಾನ ನೀಡುತ್ತೇವೆ ಎಂದು ಭರವಸೆ ಕೊಟ್ಟಿದ್ದೇವೆ. ಇದರಲ್ಲಿ ಯಾವುದೇ ಅನುಮಾನ, ಸಂಶಯ ಬೇಡ. ಇದನ್ನು ಈಡೇರಿಸುತ್ತೇವೆ. ದೆಹಲಿ ನಾಯಕರಿಂದಲೂ ಯಾವುದೇ ಭಿನ್ನಾಭಿಪ್ರಾಯವು ಇಲ್ಲ ಎಂದು ಹೇಳಿದರು.

**ಸಂಬಂಧಪಟ್ಟ ಸಚಿವರೊಂದಿಗೆ ಚರ್ಚೆ:** ಕಳಸಾ-ಬಂಡೂರಿ ಯೋಜನೆ ಕುರಿತಂತೆ ಒಂದಷ್ಟು ಗೊಂದಲ ಸೃಷ್ಟಿಯಾಗಿತ್ತು. ಸಂಬಂಧಪಟ್ಟ ಸಚಿವರೊಂದಿಗೆ ನಾನು ಹಾಗೂ ಗೃಹ ಸಚಿವ ಬಸವರಾಜ ಬೊಮ್ಮಾಯಿ ಮಾತನಾಡಿದ್ದೇವೆ. ಸಂಬಂಧಪಟ್ಟ ನೀರಾವರಿ ಸಚಿವರೊಂದಿಗೂ ಮಾತನಾಡಿದ್ದೇನೆ. ಅವರು ಸ್ಪಷ್ಟನೆಯನ್ನು ಅತಿ ಶೀಘ್ರದಲ್ಲಿ ಪ್ರಕಟಿಸಲಿದ್ದಾರೆ ಎಂದು ಹೇಳಿದರು.

ಕಳಸಾ-ಬಂಡೂರಿಯು ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವ ವಿಚಾರವಾಗಿದೆ. ಅದನ್ನು ತಡೆಯುವುದು ಧರ್ಮವಲ್ಲ. ಗೋವಾದ ಮುಖ್ಯಮಂತ್ರಿಗಳೊಂದಿಗೂ ಮಾತುಕತೆ ನಡೆಸಲಿದ್ದೇನೆ. ಸಮುದ್ರಕ್ಕೆ ಹರಿದು ಹೋಗುತ್ತಿರುವ ನೀರನ್ನು ಪರಸ್ಪರ ಪ್ರೀತಿ, ವಿಶ್ವಾಸದಿಂದ ಮಾತುಕತೆ ನಡೆಸಿ, ಕುಡಿಯುವ ನೀರಿಗೆ, ಅಡ್ಡಿಪಡಿಸದಂತೆ ಮಾತುಕತೆ ನಡೆಸಲಿದ್ದೇವೆ. ಗೋವಾ, ಕರ್ನಾಟಕ ಹಾಗೂ ಕೇಂದ್ರದಲ್ಲೂ ನಮ್ಮದೇ ಸರ್ಕಾರ ಇದೆ. ಜಲಸಂಪನ್ಮೂಲ ಸಚಿವರು ಮತ್ತು ಗೃಹ ಸಚಿವ ಅಮಿತ್ ಶಾ ಅವರು ಈ ಸಮಸ್ಯೆಗೆ ಪರಿಹಾರ ಸೂಚಿಸುತ್ತಾರೆ ಎಂಬ ಭರವಸೆ ಇದೆ. ಸಮಸ್ಯೆಗೆ ಪರಿಹಾರ ಸಿಗಬೇಕು ಎಂಬುದು ನಮ್ಮೆಲ್ಲರ ಅಪೇಕ್ಷೆಯಾಗಿದೆ. ಅದನ್ನು ಮಾಡುತ್ತೇವೆ ಎಂದು ತಿಳಿಸಿದರು.

### ಶರತ್ ಕಡೆ ನೋಡದ ಸಿಎಂ

ಪ್ರಮಾಣ ವಚನ ಸ್ವೀಕರಿಸಿದ ಹೊಸಕೋಟೆಯ ಪಕ್ಷೇತರ ಶಾಸಕ ಶರತ್ ಬಚ್ಚೇಗೌಡ, ನಂತರ ಅಧಿಕಾರಿಗಳ ಬಳಿ ತೆರಳಿ ಕಡತದಲ್ಲಿ ಸಹಿ ಮಾಡಿದರು. ಈ ವೇಳೆ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಸಚಿವರಾದ ಆರ್.ಅಶೋಕ್, ಸುರೇಶ್ ಕುಮಾರ್ ಅದೇ ಸ್ಥಳದಿಂದ ನಿರ್ಗಮಿಸಿದರು. ಈ ವೇಳೆ, ಶರತ್ ಬಚ್ಚೇಗೌಡ ಅವರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಮಾತನಾಡಿಸಲು ಪ್ರಯತ್ನಿಸಿದರು. ಮುಖ್ಯಮಂತ್ರಿಯವರನ್ನು ಕೂಗುತ್ತಾ ಅವರ ಬಳಿ ತೆರಳಿದರೂ ಕೂಡ ಶರತ್ ಬಚ್ಚೇಗೌಡ ಅವರ ಕಡೆ ಸಿಎಂ ನೋಡದೇ ಸೀದಾ ನಡೆದುಕೊಂಡು ಹೋದರು. ಮುಖ್ಯಮಂತ್ರಿಗಳ ಹಿಂದೆ ಇದ್ದ ಸಚಿವ ಆರ್.ಅಶೋಕ್ ಅವರು ಶರತ್ ಬಚ್ಚೇಗೌಡರನ್ನು ನೋಡಿದರೂ ಮಾತನಾಡದೇ ಹಾಗೆಯೇ ಮುಂದೆ ನಡೆದರು.

### ಕಾಂಗ್ರೆಸ್ ಶಾಸಕರು ಗೈರು

ಉಪಚುನಾವಣೆಯಲ್ಲಿ ಗೆದ್ದ ಎಲ್ಲ ಶಾಸಕರಿಗೂ ಪ್ರಮಾಣವಚನ ಸ್ವೀಕಾರ ಬೋಧನೆಗಾಗಿ ಭಾನುವಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬಿಜೆಪಿಯ 12 ಶಾಸಕರು ಹಾಗೂ ಓರ್ವ ಪಕ್ಷೇತರ ಶಾಸಕರು ಪ್ರಮಾಣ ವಚನ ಸ್ವೀಕರಿಸಿದರು. ಆದರೆ, ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್ ಮತ್ತು ಹುಣಸೂರು ಶಾಸಕ ಎಚ್.ಪಿ.ಮಂಜುನಾಥ್ ಅವರು ಪ್ರಮಾಣವಚನ ಸ್ವೀಕಾರ ವೇಳೆ ಗೈರಾಗಿದ್ದರು. ಕಾಂಗ್ರೆಸ್‌ನ ನಾಯಕರು ಕೂಡ ಸಭೆಯಲ್ಲಿರಲಿಲ್ಲ.

### ಮೊಳಗಿದ ಘೋಷಣೆ

ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮಕ್ಕೂ ಮುನ್ನ ಪಕ್ಷೇತರ ಶಾಸಕ ಶರತ್ ಬಚ್ಚೇಗೌಡ ಅವರ ಬೆಂಬಲಿಗರು ಸ್ವಾಭಿಮಾನಿ ಪದ ಬಳಕೆ ಮಾಡಿ ಜಯಘೋಷ ಕೂಗಿದರು. ನಂತರ, ಬಿಜೆಪಿಯ ಅರುಣ್ ಕುಮಾರ್ ಪರ ಬಿಜೆಪಿ ಬೆಂಬಲಿಗರು ಘೋಷಣೆ ಕೂಗಿದರು. ಪ್ರತಿ ಶಾಸಕರು ಪ್ರಮಾಣವಚನ ಸ್ವೀಕರಿಸುವ ಸಂದರ್ಭದಲ್ಲೂ ಅವರ ಬೆಂಬಲಿಗರ ಘೋಷಣೆ ಮುಗಿಲು ಮುಟ್ಟಿತ್ತು. ಶರತ್ ಬಚ್ಚೇಗೌಡ ಅವರ ಪ್ರಮಾಣ ವಚನ ಸ್ವೀಕಾರ ಸಂದರ್ಭದಲ್ಲಿ ಘೋಷಣೆ ಮತ್ತು ಚಪ್ಪಾಳೆ ಇನ್ನಷ್ಟು ಜಾಸ್ತಿಯಿತ್ತು.